ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 26–11–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | One Day Interactive Seminar on "Public Administration Under the rule of Law"<br><br>**Inauguration:**<br><br>Shri T.B. Jayachandra,<br><br>Minister for Law, Justice & Human Rights.<br><br>**Key Note Address:**<br><br>Shri Justice N. Kumar,<br><br>Hon'ble Judge,<br>High Court of Karnataka | 26–11–2014<br><br>Wednesday<br><br>at<br><br>9-00 AM | Bengaluru Institute of Legal Studies,<br>Vijaya College Campus,<br>R.V. Road,<br><br>Basavanagudi,<br><br>Bengaluru- 560 004. |
| 2 | ಪೊಲೀಸ್ ಪದಕ ಪ್ರದಾನ ಸಮಾರಂಭ 2014–15:<br><br>ಪದಕ ಪ್ರಧಾನ:<br><br>ಶ್ರೀ ವಜುಭಾಯ್ ವಾಲಾ<br>ರಾಜ್ಯಪಾಲರು, ಕರ್ನಾಟಕ<br><br>ಅಧ್ಯಕ್ಷತೆ:<br><br>ಶ್ರೀ ಸಿದ್ದರಾಮಯ್ಯ,<br>ಮುಖ್ಯ ಮಂತ್ರಿಗಳು, ಕರ್ನಾಟಕ ಸರ್ಕಾರ | 26–11–2014<br>ಬುಧವಾರ<br>ಬೆಳಗ್ಗೆ<br>10–30<br>ಗಂಟೆಗೆ | ರಾಜಭವನ,<br>ಬೆಂಗಳೂರು |

| | | | |
|---|---|---|---|
| | **ಮುಖ್ಯ ಅತಿಥಿಗಳು:**<br><br>**ಶ್ರೀ ಕೆ.ಜೆ. ಜಾರ್ಜ್,**<br>**ಗೃಹ ಸಚಿವರು, ಕರ್ನಾಟಕ ಸರ್ಕಾರ** | | |
| 3 | **ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ : ನೂತನ ಅಧ್ಯಕ್ಷರಾಗಿ ಶ್ರೀ ಮಸೂದ್ ಫೌಜ್ದಾರ್, ಅಧಿಕಾರ ಸ್ವೀಕಾರ**<br>**ಉಪಸ್ಥಿತಿ:**<br>**ಶ್ರೀ ಖಮರುಲ್ ಇಸ್ಲಾಂ,**<br>**ಪೌರಾಡಳಿತ ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು** | 26-11-2014<br>ಬುಧವಾರ<br>ಮಧ್ಯಾಹ್ನ<br>3-00ಗಂಟೆಗೆ | **ನಿಗಮದ ಕಚೇರಿ,**<br>**ವಿಶ್ವೇಶ್ವರಯ್ಯ ಕೇಂದ್ರ,**<br>**12 ನೇ ಮಹಡಿ,**<br>**ಮುಖ್ಯ ಗೋಪುರ,**<br>**ಡಾ: ಬಿ.ಆರ್. ಅಂಬೇಡ್ಕರ್ ವೀದಿ,**<br>**ಬೆಂಗಳೂರು** |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ರಾಜ್ಯದ ಎಲ್ಲ ಭಾಗಗಳಿಗೆ ಆರೋಗ್ಯ ಕವಚ ಸೇವೆ ವಿಸ್ತರಣೆ

ಬೆಂಗಳೂರು, ನ. 25 (ಕರ್ನಾಟಕ ವಾರ್ತೆ)-

ಎಲ್ಲ ರೀತಿಯ ತುರ್ತು ಸಂದರ್ಭದಲ್ಲಿ ರಾಜ್ಯದ ಎಲ್ಲ ಭಾಗಗಳಲ್ಲಿ ಆರೋಗ್ಯ ಕವಚ ಸೇವೆಯು ದೊರಕುವಂತೆ ಮಾಡುವುದು ಸರ್ಕಾರದ ಮುಖ್ಯ ಧ್ಯೇಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿಧಾನಸೌಧದ ಮುಂಭಾಗದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂದು ಏರ್ಪಡಿಸಿದ್ದ 108 ಆರೋಗ್ಯ ಕವಚಕ್ಕೆ ಹೊಸದಾಗಿ ಸೇರ್ಪಡೆಗೊಂಡ 198 ಅಂಬ್ಯುಲೆನ್ಸ್ ವಾಹನಗಳನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಮುಖ್ಯಮಂತ್ರಿಗಳು ಅಪಘಾತ, ಹೆರಿಗೆ ಸಮಯದಲ್ಲಿ ಹಾಗೂ ತೀವ್ರತರದ ಕಾಯಿಲೆಗಳಿಗೆ ತುತ್ತಾದ ಸಂದರ್ಭದಲ್ಲಿ ಮೊದಲ ಒಂದು ಗಂಟೆಯೊಳಗೆ ಅಗತ್ಯ ವೈದ್ಯಕೀಯ ಸೇವೆ ದೊರಕಿದಲ್ಲಿ ವ್ಯಕ್ತಿಯ ಪ್ರಾಣ ಉಳಿಸಬಹುದು. ರಾಜ್ಯದಲ್ಲಿ 6.17 ಕೋಟಿ ಜನಸಂಖ್ಯೆಯಿದ್ದು, 1 ಲಕ್ಷ ಜನಸಂಖ್ಯೆಗೊಂದರಂತೆ ಅಂಬ್ಯುಲೆನ್ಸ್ ಸೇವೆ ದೊರಕಿಸುವುದು ಸರ್ಕಾರದ ಗುರಿಯಾಗಿತ್ತು. ಆದರೆ ರಾಜ್ಯದಲ್ಲಿ ಪ್ರಸ್ತುತ ಹೊಸ 198 ಅಂಬ್ಯುಲೆನ್ಸ್ ವಾಹನಗಳೂ ಸೇರಿದಂತೆ 715 ಅಂಬ್ಯುಲೆನ್ಸ್‌ಗಳು ಇಂದಿನಿಂದ ಕರ್ತವ್ಯ ನಿರ್ವಹಿಸಲಿದ್ದು, 1 ಲಕ್ಷ ಕ್ಕಿಂತಲೂ ಕಡಿಮೆ ಜನಸಂಖ್ಯೆಗೊಂದರಂತೆ ವಾಹನ ಒದಗಿಸಿದಂತಾಗಿದೆ ಎಂದರು.

108 ಅಂಬ್ಯುಲೆನ್ಸ್ ವಾಹನದಲ್ಲಿ ತುರ್ತು ಚಿಕಿತ್ಸೆಗೆ ಬೇಕಾದ ಎಲ್ಲ ಸೌಲಭ್ಯಗಳಿವೆ ಎಂದ ಮುಖ್ಯಮಂತ್ರಿಗಳು ರಾಜ್ಯದಲ್ಲಿನ ಬಡವರೂ ಸೇರಿದಂತೆ ಎಲ್ಲ ವರ್ಗದವರಿಗೂ ತುರ್ತು ಆರೋಗ್ಯ ಸೇವೆ ಒದಗಿಸಬೇಕೆಂಬುದು ಸರ್ಕಾರದ ಗುರಿ. ಪ್ರತಿಯೊಬ್ಬರ ಪ್ರಾಣವೂ ಕೂಡ ಅಮೂಲ್ಯವಾದದ್ದು ಎಂದರು.

ಬಡವರು ಉತ್ತಮ ಚಿಕಿತ್ಸೆ ಪಡೆಯಲು ಆರ್ಥಿಕ ಶಕ್ತಿ ಇರುವುದಿಲ್ಲ. ಅಂತಹವರಿಗೆ ಆರೋಗ್ಯ ಕವಚ ಯೋಜನೆ ಸಹಕಾರಿಯಾಗಲಿದೆ ಎಂದರು.

ಜನವರಿ ಮೊದಲ ವಾರದಲ್ಲಿ ಮೋಟರ್ ಬೈಕ್ ಅಂಬ್ಯುಲೆನ್ಸ್ ಸೇವೆಯನ್ನು ರಾಜ್ಯದಲ್ಲಿ ಕಾರ್ಯಾರಂಭ ಮಾಡಲು ಉದ್ದೇಶಿಸಲಾಗಿದೆ ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶ್ರೀ ಯು.ಟಿ. ಖಾದರ್ ಅವರು ಪ್ರಾಸ್ತಾವಿಕವಾಗಿ ಮಾತನಾಡುತ್ತ ರಾಜ್ಯದಲ್ಲಿ ಮುಖ್ಯಮಂತ್ರಿಗಳ ನಾಯಕತ್ವದಲ್ಲಿ ಆರೋಗ್ಯ ಕ್ರಾಂತಿ ನಡೆದಿದೆ. ಆರೋಗ್ಯ ಕವಚ ಯೋಜನೆಯನ್ನು ಮತ್ತಷ್ಟು ಬಲಿಷ್ಠಗೊಳಿಸಲು ಮುಖ್ಯಮಂತ್ರಿಯವರು ಎಲ್ಲ ರೀತಿಯ ಸಹಕಾರ ನೀಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಏರ್ ಅಂಬ್ಯುಲೆನ್ಸ್ ಮತ್ತು ಮೋಟರ್ ಬೈಕ್ ಅಂಬ್ಯುಲೆನ್ಸ್ ಸೇವೆ ಜನರಿಗೆ ಲಭ್ಯವಾಗುವುದು ಎಂದರು.

ಡಿಸೆಂಬರ್ ಅಂತ್ಯದೊಳಗೆ 60 ವರ್ಷ ಮೇಲ್ಪಟ್ಟ ಹಿರಿಯರಿಗೆ ಉಚಿತ ಕೃತಕ ದಂತ ಅಳವಡಿಕೆ ಯೋಜನೆ ಆರಂಭಿಸಲಾಗುವುದು ಎಂದ ಸಚಿವರು ಜಿಲ್ಲೆಗೊಂದು ಡಯಾಲಿಸಿಸ್ ಸೆಂಟರ್ ಪ್ರಾರಂಭಿಸಲೂ ಕ್ರಮ ಕೈಗೊಳ್ಳಲಾಗಿದೆ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಮೂಲ ಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವ ಶ್ರೀ ಆರ್. ರೋಷನ್ ಬೇಗ್ ವಹಿಸಿದ್ದರು. ಬೆಂಗಳೂರು ಮಹಾನಗರ ಪಾಲಿಕೆ ಮಹಾಪೌರರಾದ ಶ್ರೀಮತಿ ಶಾಂತಕುಮಾರಿ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಶ್ರೀ ದಿನೇಶ್ ಗುಂಡೂರಾವ್, ಶಾಸಕರಾದ ಶ್ರೀ ಮಾಲೀಕಯ್ಯ ಗುತ್ತೇದಾರ್, ಶ್ರೀ ಬೈರತಿ ಬಸವರಾಜ್ ಜಿವಿಕೆ ಸಂಸ್ಥೆ ನಿರ್ದೇಶಕ ಶ್ರೀ ಕೃಷ್ಣಂ ರಾಜು, ಆರೋಗ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಶ್ರೀ ಶಿವಶೈಲಂ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಾದ ಶ್ರೀ ಪಿ.ಎಸ್. ವಸ್ತ್ರದ ಮೊದಲಾದವರು ಉಪಸ್ಥಿತರಿದ್ದರು.

## ಮನೆಗೊಂದು ಶೌಚಾಲಯ ಅನಿವಾರ್ಯ- ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ನ. 25 (ಕರ್ನಾಟಕ ವಾರ್ತೆ)-

ಮನೆಗೊಂದು ಶೌಚಾಲಯ ಇಂದಿನ ದಿನದಲ್ಲಿ ಅನಿವಾರ್ಯವಾಗಿದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವಿಕಾಸಸೌಧ ಸಮ್ಮೇಳನ ಸಭಾಂಗಣದಲ್ಲಿ ಇಂದು ಏರ್ಪಡಿಸಿದ್ದ ಗ್ರಾಮೀಣಾಭಿವೃದ್ಧಿ ಪಥ- ವಿಧಾನ ಸಭಾ ಸದಸ್ಯರಿಗೆ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ, ಪ್ರತಿ ಮತ ಕ್ಷೇತ್ರಗಳ ಗ್ರಾಮೀಣಾಭಿವೃದ್ಧಿ ಯೋಜನೆಗಳ ಪೂರ್ಣ

ಮಾಹಿತಿಯುಳ್ಳ ಮೂರು ಪುಸ್ತಕಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಮುಖ್ಯಮಂತ್ರಿಗಳು ಪ್ರತಿ ಗ್ರಾಮಕ್ಕೆ ಒಂದು ಶಾಲೆ, ಶೌಚಾಲಯ, ಸೊಸೈಟಿ, ಚರಂಡಿ ವ್ಯವಸ್ಥೆ, ಆಟದ ಮೈದಾನ ಇವುಗಳು ಕಡ್ಡಾಯವಾಗಿರಬೇಕು ಗ್ರಾಮ ಸ್ವರಾಜ್ಯದ ಕನಸು ನನಸು ಮಾಡಲು, ಚುನಾಯಿತ ಪ್ರತಿನಿಧಿಗಳು ಮುಂದಾಗಬೇಕು ಎಂದರು.

ಪ್ರತಿಯೊಬ್ಬರಿಗೂ ಶೌಚಾಲಯ ಅತಿ ಅಗತ್ಯ. ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು. ಈ ಬಗ್ಗೆ ಚುನಾಯಿತ ಜನ ಪ್ರತಿನಿಧಿಗಳು ಆಸಕ್ತಿ ವಹಿಸಿದರೆ ನಮ್ಮ ರಾಜ್ಯವನ್ನು ಬಹಿರ್ದೆಸೆ ಮುಕ್ತ ರಾಜ್ಯವಾಗಿ ಮಾಡಬಹುದಾಗಿದೆ.

ಗ್ರಾಮೀಣ ಭಾಗದ ಸುಧಾರಣೆಯಾಗಬೇಕಾದರೆ ಸ್ವಚ್ಛತೆಯೂ ಅಷ್ಟೇ ಮುಖ್ಯ. ಈ ಬಗ್ಗೆ ನಾವು ಗಮನ ಹರಿಸಬೇಕಾಗಿದೆ. ಸರ್ಕಾರ ಯೋಜನೆಗಳನ್ನು ಶಾಸಕರು ಸಮರ್ಥವಾಗಿ ಮೇಲ್ವಿಚಾರಣೆ ನಡೆಸಿದರೆ ಯೋಜನೆಗಳ ಅನುಷ್ಠಾನ ಯಶಸ್ವಿಯಾಗಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಈಗಿರುವ ಪಂಚಾಯತ್‌ರಾಜ್ ವ್ಯವಸ್ಥೆ ಹಲವು ಬದಲಾವಣೆಗಳನ್ನು ಕಂಡಿದೆ. ಇನ್ನೂ ಹಲವು ಬದಲಾವಣೆಗಳಾಗಬೇಕಾಗಿದೆ. ಈ ನಿಟ್ಟಿನಲ್ಲಿ ಶಾಸಕ ರಮೇಶ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ. ಪಂಚಾಯತ್ ರಾಜ್ ವ್ಯವಸ್ಥೆ ಯಾವರೀತಿ ಇರಬೇಕೆಂದು ತಿದ್ದುಪಡಿಗೆ ಶಿಫಾರಸು ಮಾಡಿ ವರದಿ ನೀಡಿದ್ದಾರೆ. ಅದು ಸರ್ಕಾರದ ಪರಿಶೀಲನೆಯಲ್ಲಿದೆ ಎಂದು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಶ್ರೀ ಎಚ್.ಕೆ. ಪಾಟೀಲ ಅವರು ರಾಜ್ಯದ ಅಭಿವೃದ್ಧಿಗೆ ಚುನಾಯಿತ ಪ್ರತಿನಿಧಿಗಳು ನಾಯಕತ್ವ ವಹಿಸುವ ಮೂಲಕ ಗ್ರಾಮೀಣ ಭಾಗದಲ್ಲಿ ಗುಣಾತ್ಮಕ ಬದಲಾವಣೆ ತರಬೇಕು ಎಂದರು.

ರಾಜ್ಯದಲ್ಲಿ ಇನ್ನೂ 56 ಲಕ್ಷ ಶೌಚಾಲಯಗಳ ನಿರ್ಮಾಣ ಕಾರ್ಯ ಆಗಬೇಕಾಗಿದೆ ಎಂದ ಅವರು, ಕೊಪ್ಪಳ ಜಿಲ್ಲೆಯಲ್ಲಿ ಒಂದು ವರ್ಷದಲ್ಲಿ ಒಂದು ಲಕ್ಷ ಶೌಚಾಲಯ ನಿರ್ಮಾಣವಾಗಿದ್ದು, ಇತರ ಜಿಲ್ಲೆಗಳಲ್ಲೂ ಈ ಮಾದರಿ ಅನುಸರಿಸಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಶಾಸಕರ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಕುರಿತ ಪೂರ್ಣ ಮಾಹಿತಿಯುಳ್ಳ ಮೂರು ಪುಸ್ತಕಗಳನ್ನು ಒದಗಿಸಲಾಗಿದೆ. ಅದನ್ನು ಓದಿದರೆ, ನಿಮ್ಮ ಕ್ಷೇತ್ರದ ಅಭಿವೃದ್ಧಿ ಯೋಜನೆಗಳ ಪ್ರಗತಿಯ ಮಾಹಿತಿ ದೊರೆಯುವುದು. ಇದನ್ನು ಆಧರಿಸಿ ತಮ್ಮ ತಮ್ಮ ಕ್ಷೇತ್ರಗಳ ಅಭಿವೃದ್ಧಿ ಸಾಧನೆಗೆ ನೆರವಾಗಲಿದೆ ಎಂದು ತಿಳಿಸಿದರು. ಕ್ಷೇತ್ರದ ಅಭಿವೃದ್ಧಿಗಾಗಿ ಈ ಮಾಹಿತಿಯ ಸದುಪಯೋಗಪಡಿಸಿಕೊಳ್ಳುವಂತೆ ಶಾಸಕರಿಗೆ ಸಚಿವರು ಸಲಹೆ ನೀಡಿದರು.

ಸಮಾರಂಭದ ಅಧ್ಯಕ್ಷತೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವ ಶ್ರೀ ಆರ್. ರೋಷನ್ ಬೇಗ್ ವಹಿಸಿದ್ದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಶ್ರೀಮತಿ ಉಮಾಶ್ರೀ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ, ಲೋಕೋಪಯೋಗಿ ಸಚಿವ ಡಾ. ಎಚ್.ಸಿ. ಮಹದೇವಪ್ಪ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ

ಶ್ರೀ ಟಿ.ಎಂ. ವಿಜಯಭಾಸ್ಕರ್, ಇಲಾಖೆಯ ಕಾರ್ಯದರ್ಶಿ ಶ್ರೀ ಗಂಗಾರಾಮ್ ಬಡೇರಿಯಾ ಮೊದಲಾದವರು ಉಪಸ್ಥಿತರಿದ್ದರು.

## ಸಾಂಸ್ಕೃತಿಕ ವಿನಿಮಯದಲ್ಲಿ ಪಾಲ್ಗೊಳ್ಳಿ: ಕಲಾವಿದರಿಗೆ ಸಲಹೆ

ಬೆಂಗಳೂರು, ನ. 25 (ಕರ್ನಾಟಕ ವಾರ್ತೆ)-

ಕರ್ನಾಟಕದ ಸಂಸ್ಕೃತಿಗೆ ಸಂಬಂಧಿಸಿದ ಎಲ್ಲ ಚಿತ್ರಗಳನ್ನು ಇತರೆ ರಾಜ್ಯಗಳಿಗೆ ಕಳುಹಿಸಿದಲ್ಲಿ ಸಾಂಸ್ಕೃತಿಕ ವಿನಿಮಯಕ್ಕೆ ಉತ್ತಮ ಅವಕಾಶ ದೊರೆಯುತ್ತದೆ ಎಂದು ಕೇಂದ್ರ ಲಲಿತಕಲಾ ಅಕಾಡೆಮಿ ಅಧ್ಯಕ್ಷ ಡಾ: ಚಕ್ರವರ್ತಿ ಅವರು ತಿಳಿಸಿದರು.

ಅವರು ಇಂದು ನಗರದ ವೆಂಕಟಪ್ಪ ಆರ್ಟ್ ಗ್ಯಾಲರಿಗೆ ಭೇಟಿ ನೀಡಿದ್ದರು. ಎಲ್ಲ ಕಲೆಗಳಿಗೂ ಕೇಂದ್ರ ಲಲಿತಕಲಾ ಅಕಾಡೆಮಿ ಪ್ರೋತ್ಸಾಹ ನೀಡುತ್ತದೆ. ರಾಜ್ಯದ ಎಲ್ಲ ಕಲಾವಿದರ ವಿಶೇಷ ಕಲಾಕೃತಿಗಳ ಛಾಯಾಚಿತ್ರ, ಕಲಾವಿದರ ಹೆಸರು, ವಿಳಾಸ, ದೂರವಾಣಿ, ಇ-ಮೇಲ್ ಮುಂತಾದ ಮಾಹಿತಿ ಒಳಗೊಂಡ ಪುಸ್ತಕ ಮುದ್ರಿಸಿದಲ್ಲಿ ಈ ಕಲಾವಿದರನ್ನು ರಾಷ್ಟ್ರವ್ಯಾಪಿ ಪರಿಚಯಿಸಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಕನ್ನಡ ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್, ಕಲಾವಿದರ ಪ್ರತಿಭೆಯನ್ನು ಮತ್ತಷ್ಟು ಪಸರಿಸಲು ಸರ್ಕಾರದವತಿಯಿಂದ ತರಬೇತಿ ನೀಡಲಾಗುವುದು ಜೊತೆಗೆ ಪ್ರೋತ್ಸಾಹಧನವನ್ನು ನೀಡಲಾಗುವುದು. ಇದರಿಂದ ಕಲಾವಿದರು ಕಲಾಲೋಕದಲ್ಲಿಯೆ ಪಯಣಿಸಲು ಅನುಕೂಲವಾಗುವುದು ಎಂದು ಅಭಿಪ್ರಾಯಪಟ್ಟರು. ಕರ್ನಾಟಕ ಲಲಿತಕಲಾ ಅಕಾಡೆಮಿ ಅಧ್ಯಕ್ಷ ಡಾ: ಎಂ.ಎಸ್. ಮೂರ್ತಿ ಹಾಗೂ ಹಲವಾರು ಕಲಾವಿದರು ಹಾಜರಿದ್ದರು. ಈ ಸಂದರ್ಭದಲ್ಲಿ ಡಾ: ಚಕ್ರವರ್ತಿ ಅವರು ಆರ್ಟ್ ಗ್ಯಾಲರಿಯ 74 ಕಲಾ ಕೃತಿಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಸಮ/ಕೆಎಂ